ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.

ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಮು.ಪ.ಫ/02/2023–24 ದಿನಾಂಕ:10.07.2023

# ;; ಸುತ್ತೋಲೆ ::

ವಿಷಯ:– ಜೂನ್–2023ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಹಾಜರಾದ ವಿದ್ಯಾರ್ಥಿಗಳ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ ವಿಸ್ತರಣೆ ಕುರಿತು.

ಉಲ್ಲೇಖ:– ಈ ಕಛೇರಿ ಸುತ್ತೋಲೆ ಸಂಖ್ಯೆ:ಎ8/ಎಸ್‌ಎಸ್‌ಎಲ್‌ಸಿ/ಮು.ಪ.ಫ/02/2023–24 ದಿನಾಂಕ:30.06.2023.

* * * * *

ಜೂನ್–2023ರ ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಹಾಜರಾದ ವಿದ್ಯಾರ್ಥಿಗಳ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ದಿನಾಂಕ:10.07.2023ರ ವರೆಗೆ ನಿಗಧಿಪಡಿಸಲಾಗಿತ್ತು. ಅಭ್ಯರ್ಥಿಗಳು/ಪೋಷಕರು ಹಾಗೂ ಶಾಲಾ ಮುಖ್ಯೋಪಾಧ್ಯಾಯರು ದಿನಾಂಕವನ್ನು ವಿಸ್ತರಿಸಲು ಮಂಡಳಿಗೆ ಮನವಿ ಮಾಡಿರುವುದರ ಹಿನ್ನೆಲೆಯಲ್ಲಿ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳ ಮರುಎಣಿಕೆ ಮತ್ತು ಮರುಮೌಲ್ಯಮಾಪನಕ್ಕೆ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೆಳಕಂಡಂತೆ ದಿನಾಂಕವನ್ನು ವಿಸ್ತರಿಸಲಾಗಿದೆ.

| ಕ್ರ ಸಂ | ವಿವರ | ಈಗಾಗಲೇ ನಿಗದಿಪಡಿಸಿದ್ದ ದಿನಾಂಕ | ವಿಸ್ತರಣೆ ಮಾಡಿದ ಕೊನೆಯ ದಿನಾಂಕ |
|---|---|---|---|
| 1 | ಉತ್ತರ ಪತ್ರಿಕೆಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 10.07.2023 | 12.07.2023 |
| 2 | ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 10.07.2023 | 12.07.2023 |
| 3 | ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ನಂತರ Offline ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬಿ1/ಕೆ1/ಗ್ರಾಮ1/ಬ್ಯಾಂಕಿಗೆ ಪಾವತಿಸಲು ಅಂತಿಮ ದಿನಾಂಕ: | 11.07.2023 | 13.07.2023 |

ಮೇಲೆ ವಿವರಿಸಿರುವಂತೆ ವಿಸ್ತರಿಸಿರುವ ದಿನಾಂಕದ ಕುರಿತು ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲಾ ಮುಖ್ಯೋಪಾಧ್ಯಾಯರ ಮುಖಾಂತರ ವಿದ್ಯಾರ್ಥಿಗಳ/ಪೋಷಕರ ಗಮನಕ್ಕೆ ತಂದು ವಿದ್ಯಾರ್ಥಿಗಳು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಸಿದೆ.

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

ಗೆ

1. ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನಿತ, ಅನುದಾನರಹಿತ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಮಂಡಳಿಯ ಎಲ್ಲಾ ಪರಿಶೀಲನಾ ಶಾಖೆಗಳ ಶಾಖಾಧಿಕಾರಿಗಳು/ಅಧೀಕ್ಷಕರುಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ಶಾಖಾಧಿಕಾರಿಗಳು, ಗಣಕಶಾಖೆರವರು ಸದರಿ ಸುತ್ತೋಲೆಯನ್ನು ಮಂಡಳಿ ಜಾಲಾತಾಣ ಮತ್ತು ಶಾಲಾ ಲಾಗಿನ್ ನಲ್ಲಿ ಪ್ರಕಟಿಸುವುದು.

ಪ್ರತಿಯನ್ನು:

1. ಮಾನ್ಯ ಅಧ್ಯಕ್ಷರ ಆಪ್ತ ಶಾಖೆಗೆ ಮಾಹಿತಿಗಾಗಿ
2. ಕಛೇರಿ ಪ್ರತಿ.

A8_letter1